**National**
**Kannada**
**31.01.2026 7.35 pm**

ಆಕಾಶವಾಣಿ, ಬೆಂಗಳೂರು

ರಾಷ್ಟ್ರೀಯ ವಾರ್ತೆಗಳು

ಮುಖ್ಯಾಂಶಗಳು

೧. ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರಿಂದ ನಾಳೆ ೨೦೨೬-೨೭ನೇ ಸಾಲಿನ ಕೇಂದ್ರ ಬಜೆಟ್ ಮಂಡನೆ

೨. ಅರಬ್ ರಾಷ್ಟ್ರಗಳ ನಿಯೋಗದೊಂದಿಗೆ ಪ್ರಧಾನಿ ನರೇಂದ್ರ ಮೋದಿ ಮಾತುಕತೆ

೩. ಮಹಾರಾಷ್ಟ್ರ ಉಪಮುಖ್ಯಮಂತ್ರಿಯಾಗಿ ಸುನೇತ್ರಾ ಪವಾರ್ ಇಂದು ಪ್ರಮಾಣ ವಚನ ಸ್ವೀಕಾರ

೪. ಆಸ್ಟ್ರೇಲಿಯಾ ಓಪನ್ ಟೆನಿಸ್ ಪ್ರಶಸ್ತಿ ಮುಡಿಗೇರಿಸಿಕೊಂಡ ಖಜಕಿಸ್ತಾನದ ಎಲೆನಾ ರೈಬಾಕಿನಾ

<>><><*><><<>

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ನಾಳೆ ೨೦೨೬-೨೭ನೇ ಸಾಲಿನ ಕೇಂದ್ರ ಬಜೆಟ್ ಮಂಡಿಸಲಿದ್ದಾರೆ. ಲೋಕಸಭೆಯಲ್ಲಿ ಬಜೆಟ್ ಮಂಡಿಸಿದ ನಂತರ, ಬಜೆಟ್ ಪ್ರತಿಯನ್ನು ರಾಜ್ಯಸಭೆಯಲ್ಲಿ ಮಂಡಿಸಲಾಗುವುದು. ೨೦೧೯ರಲ್ಲಿ ಅಧಿಕಾರ ವಹಿಸಿಕೊಂಡ ನಂತರ ನಿರ್ಮಲಾ ಸೀತಾರಾಮನ್ ಅವರ ಸತತ ಒಂಬತ್ತನೇ ಬಜೆಟ್ ಮಂಡನೆ ಇದಾಗಿದೆ. ಸಂಸತ್ತಿನಲ್ಲಿ ಬಜೆಟ್ ಭಾಷಣದ ನಂತರ ಬಜೆಟ್ ದಾಖಲೆಗಳು ಮೊಬೈಲ್ ಅಪ್ಲಿಕೇಶನ್ ಮತ್ತು ವೆಬ್‌ಸೈಟ್‌ನಲ್ಲಿ ಲಭ್ಯವಿರುತ್ತವೆ. ಬಜೆಟ್ ಸಿದ್ಧತೆಗೆ ಮುನ್ನ, ಹಣಕಾಸು ಸಚಿವರು, ಅರ್ಥಶಾಸ್ತ್ರಜ್ಞರು, ಕಾರ್ಮಿಕ ಸಂಘಗಳು, ಶಿಕ್ಷಣ ಮತ್ತು ಆರೋಗ್ಯ ವಲಯ, ಎಂಎಸ್‌ಎಂಇ, ವ್ಯಾಪಾರ ಮತ್ತು ಸೇವೆಗಳು, ಕೈಗಾರಿಕೆ, ಹಣಕಾಸು ವಲಯ ಹಾಗೂ ಬಂಡವಾಳ ಮಾರುಕಟ್ಟೆ ತಜ್ಞರು ಮತ್ತು ಪ್ರತಿನಿಧಿಗಳು ಸೇರಿದಂತೆ ಹಲವಾರು ಪಾಲುದಾರರೊಂದಿಗೆ ಬಜೆಟ್ ಪೂರ್ವ ಸಮಾಲೋಚನಾ ಸಭೆಗಳನ್ನು ನಡೆಸಿದರು. ಕೃಷಿ ಸಚಿವ ಶಿವರಾಜ್ ಸಿಂಗ್ ಅವರು ಕೃಷಿ ಮತ್ತು ಗ್ರಾಮೀಣಾಭಿವೃದ್ಧಿಗೆ ಸಂಬಂಧಿಸಿದ ವಿವಿಧ ಅಂಶಗಳ ಕುರಿತು ವ್ಯಾಪಕವಾದ ಪೂರ್ವ-ಬಜೆಟ್ ಸಮಾಲೋಚನೆಗಳನ್ನು ನಡೆಸಿದ್ದು, ಸಲಹೆಗಳ ವರದಿಯನ್ನು ಹಣಕಾಸು ಸಚಿವರಿಗೆ ಸಲ್ಲಿಸಿದ್ದಾರೆ.

<>><><*><><<>

ವಿದೇಶಾಂಗ ಸಚಿವ ಡಾ.ಎಸ್.ಜೈಶಂಕರ್ ನವದೆಹಲಿಯಲ್ಲಿಂದು ಓಮನ್ ವಿದೇಶಾಂಗ ಸಚಿವ ಬದರ್ ಅಲ್ಬು ಸೈದಿ ಅವರನ್ನು ಭೇಟಿಯಾಗಿ ಮಾತುಕತೆ ನಡೆಸಿದರು. ಸಭೆಯಲ್ಲಿ ವ್ಯಾಪಾರ, ನಿರ್ಣಾಯಕ ಖನಿಜಗಳು ಮತ್ತು ಪ್ರಾದೇಶಿಕ ಬೆಳವಣಿಗೆಗಳ ಕುರಿತು ಚರ್ಚಿಸಲಾಯಿತು. ಈ ಚರ್ಚೆಗಳು ಓಮನ್ ಜೊತೆಗಿನ ಭಾರತದ ಕಾರ್ಯತಂತ್ರದ ಪಾಲುದಾರಿಕೆಯ ವಿಶ್ವಾಸ ಮತ್ತು ಸೌಕರ್ಯವನ್ನು ಪ್ರತಿಬಿಂಬಿಸುತ್ತದೆ ಎಂದು ಸಾಮಾಜಿಕ ಜಾಲತಾಣದಲ್ಲಿ ಸಚಿವ ಡಾ.ಎಸ್.ಜೈಶಂಕರ್ ಹೇಳಿದ್ದಾರೆ.

<>><><*><><<>

ಭಾರತ-ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದದೊಂದಿಗೆ ಮುಂದಿನ ಐದು ವರ್ಷಗಳಲ್ಲಿ ಐರೋಪ್ಯ ಒಕ್ಕೂಟದ ರಾಷ್ಟ್ರಗಳಿಗೆ ಭಾರತದ ರಫ್ತು ದ್ವಿಗುಣಗೊಳ್ಳುವ ನಿರೀಕ್ಷೆಯಿದೆ ಎಂದು ಕೇಂದ್ರ ವಾಣಿಜ್ಯ ಮತ್ತು ಕೈಗಾರಿಕಾ ಸಚಿವ ಪಿಯೂಷ್ ಗೋಯಲ್ ಹೇಳಿದ್ದಾರೆ. ಸಂದರ್ಶನವೊಂದರಲ್ಲಿ ಮಾತನಾಡಿದ ಅವರು, ಈ ನಿಟ್ಟಿನಲ್ಲಿ ಉದ್ಯಮಿಗಳು, ಎಮ್‌ಎಸ್‌ಎಮ್‌ಇ ಗಳು, ನವೋದ್ಯಮಗಳು, ಅಂತಾರಾಷ್ಟ್ರೀಯ ಮಟ್ಟದಲ್ಲಿ ಗಮನಹರಿಸುವಂತೆ ಅವರು ಒತ್ತಾಯಿಸಿದ್ದಾರೆ. ಭಾರತ ಐರೋಪ್ಯ ಒಕ್ಕೂಟ ಮುಕ್ತ ವ್ಯಾಪಾರ ಒಪ್ಪಂದವು, ಪ್ರಬಲವಾದ ಮುಕ್ತ ವ್ಯಾಪಾರ ವ್ಯಾಪಾರವಾಗಿದ್ದು, ಇದು ದೇಶದ ಸೂಕ್ಷ್ಮ ವಲಯಗಳನ್ನು ರಕ್ಷಿಸುವುದರ ಜೊತೆಗೆ ಭಾರತಕ್ಕೆ ಪ್ರಮುಖ ಅವಕಾಶಗಳನ್ನು ತೆರೆಯುತ್ತವೆ ಎಂದು ಸಚಿವ ಪಿಯೂಷ್ ಗೋಯಲ್ ಅಭಿಪ್ರಾಯಪಟ್ಟಿದ್ದಾರೆ.

**<>><><*><><<>**

ಎರಡನೇ ಭಾರತ-ಅರಬ್ ವಿದೇಶಾಂಗ ಸಚಿವರ ಸಭೆಗಾಗಿ ನವದೆಹಲಿಯಲ್ಲಿರುವ ಅರಬ್ ರಾಷ್ಟ್ರಗಳ ವಿದೇಶಾಂಗ ಸಚಿವರು, ಪ್ರಧಾನ ಕಾರ್ಯದರ್ಶಿಗಳು ಮತ್ತು ಅರಬ್ ನಿಯೋಗಗಳ ಮುಖ್ಯಸ್ಥರನ್ನು ಪ್ರಧಾನಿ ನರೇಂದ್ರ ಮೋದಿ ಭೇಟಿಯಾಗಿ ಮಾತುಕತೆ ನಡೆಸಿದರು. ಭಾರತ ಮತ್ತು ಅರಬ್ ದೇಶದ ಜನರ ನಡುವಿನ ಸಂಬಂಧವು ಸ್ಫೂರ್ತಿದಾಯಕವಾಗಿದೆ ಎಂದು ಸಭೆಯಲ್ಲಿ ಪ್ರಧಾನಿ ಮೋದಿ ಹೇಳಿದರು. ಮುಂಬರುವ ವರ್ಷಗಳಲ್ಲಿ ಭಾರತ-ಅರಬ್ ಪಾಲುದಾರಿಕೆಯ ಬಗೆಗಿನ ತಮ್ಮ ದೃಷ್ಟಿಕೋನವನ್ನು ವಿವರಿಸಿದರು. ಜನರ ಪ್ರಯೋಜನಕ್ಕಾಗಿ ವ್ಯಾಪಾರ ಮತ್ತು ಹೂಡಿಕೆ ಇಂಧನ, ತಂತ್ರಜ್ಞಾನ, ಆರೋಗ್ಯ ಮತ್ತು ಇತರ ಆದ್ಯತೆಯ ಕ್ಷೇತ್ರಗಳಲ್ಲಿ ಸಹಕಾರವನ್ನು ಮತ್ತಷ್ಟು ಗಾಢಗೊಳಿಸುವ ಭಾರತದ ಬದ್ಧತೆಯನ್ನು ಪ್ರಧಾನಿ ಪುನರುಚ್ಚರಿಸಿದರು. ಪ್ಯಾಲೆಸ್ಟೈನ್ ಜನರಿಗೆ ಭಾರತದ ನಿರಂತರ ಬೆಂಬಲವನ್ನು ಮತ್ತು ಗಾಜಾ ಶಾಂತಿ ಯೋಜನೆ ಸೇರಿದಂತೆ ನಡೆಯುತ್ತಿರುವ ಶಾಂತಿ ಯತ್ನಗಳನ್ನು ಸ್ವಾಗತಿಸಿ, ಪ್ರಾದೇಶಿಕ ಶಾಂತಿ ಮತ್ತು ಸ್ಥಿರತೆಯ ಪ್ರಯತ್ನಗಳನ್ನು ಬೆಂಬಲಿಸುವಲ್ಲಿ ಅರಬ್ ಲೀಗ್ ವಹಿಸಿದ ಪ್ರಮುಖ ಪಾತ್ರಕ್ಕೆ ಪ್ರಧಾನಿ ನರೇಂದ್ರ ಮೋದಿ ಮೆಚ್ಚುಗೆ ವ್ಯಕ್ತಪಡಿಸಿದರು.

**<>><><*><><<>**

ರಾಜ್ಯಸಭಾ ಸಂಸದೆ ಸುನೇತ್ರಾ ಪವಾರ್ ಇಂದು ಮಹಾರಾಷ್ಟ್ರದ ಉಪಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದರು. ೬೨ ವರ್ಷದ ಅವರು ಮಹಾರಾಷ್ಟ್ರದ ಮೊದಲ ಮಹಿಳಾ ಉಪಮುಖ್ಯಮಂತ್ರಿಯಾಗಿದ್ದಾರೆ. ಈ ವಾರದ ಆರಂಭದಲ್ಲಿ ವಿಮಾನ ಅಪಘಾತದಲ್ಲಿ ಅವರ ಪತಿ ಮತ್ತು ಮಹಾರಾಷ್ಟ್ರ ಉಪಮುಖ್ಯಮಂತ್ರಿ ಅಜಿತ್ ಪವಾರ್ ಅವರ ಹಠಾತ್ ನಿಧನದ ನಂತರ ಈ ಬೆಳವಣಿಗೆಗಳು ಬಂದಿದೆ. ಇಂದು ಮುಂಜಾನೆ, ದಕ್ಷಿಣ ಮುಂಬೈನ ವಿಧಾನ ಭವನ ಸಂಕೀರ್ಣದಲ್ಲಿರುವ ದಿವಂಗತ ಅಜಿತ್ ಪವಾರ್ ಅವರ ಕಚೇರಿಯಲ್ಲಿ ನಡೆದ ಪಕ್ಷದ ಶಾಸಕಾಂಗ ಪಕ್ಷದ ಸಭೆಯಲ್ಲಿ ಸುನೇತ್ರಾ ಪವಾರ್ ಅವರನ್ನು ಎನ್‌ಸಿಪಿ ಶಾಸಕಾಂಗ ಪಕ್ಷದ ನಾಯಕಿಯಾಗಿ ಸರ್ವಾನುಮತದಿಂದ ಆಯ್ಕೆ ಮಾಡಲಾಯಿತು.

**<>><><*><><<>**

<u>ಪ್ರಗತಿ</u>

ಸಕ್ರಿಯ ಆಡಳಿತ ಮತ್ತು ಸಕಾಲಿಕ ಅನುಷ್ಠಾನಕ್ಕಾಗಿ ಪ್ರಧಾನಮಂತ್ರಿಗಳ ಪ್ರಮುಖ ವೇದಿಕೆಯಾದ ಪ್ರಗತಿ, ತನ್ನ ೫೦ನೇ ಸಭೆಯನ್ನು ಯಶಸ್ವಿಯಾಗಿ ನಡೆಸುವುದರೊಂದಿಗೆ ಮಹತ್ವದ ಮೈಲಿಗಲ್ಲನ್ನು ಸಾಧಿಸಿದೆ. ಇಂದು ರೈಲ್ವೆ ಸಚಿವಾಲಯಕ್ಕೆ ಸಂಬಂಧಿಸಿದ ಯೋಜನೆಗಳ ಕುರಿತು ವಿಶೇಷ ವರದಿ ಇದೀಗ ಮೂಡಿಬರಲಿದೆ.

ಧ್ವನಿ: ವಿಶೇಷ ವರದಿ: ಕೆ.ವೈ.ಭಾರತಿ

ಭಾರತೀಯ ರೈಲ್ವೆ ದೇಶದ ಆರ್ಥಿಕ ಮತ್ತು ಸಾಮಾಜಿಕ ಮೂಲಸೌಕರ್ಯದ ಪ್ರಮುಖ ಆಧಾರ ಸ್ತಂಭಗಳಲ್ಲಿ ಒಂದಾಗಿದೆ. ಇದು ದೇಶಾದ್ಯಂತ ಪ್ರಯಾಣಿಕರ ಚಲನಶೀಲತೆ ಮತ್ತು ಸರಕು ಸಾಗಣೆಯ ಬೆನ್ನೆಲುಬಾಗಿದೆ. ವಿಶ್ವದ ಅತಿದೊಡ್ಡ ರೈಲ್ವೆ ವ್ಯವಸ್ಥೆಗಳಲ್ಲಿ ಒಂದಾಗಿರುವ ಭಾರತೀಯ ರೈಲ್ವೆ, ರಾಷ್ಟ್ರೀಯ ಏಕೀಕರಣ, ಲಾಜಿಸ್ಟಿಕ್ಸ್ ಕಾರ್ಯಕ್ಷಮತೆ ಮತ್ತು ಪ್ರಾದೇಶಿಕ ಸಂಪರ್ಕದಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ.

೧೨ ಲಕ್ಷ ಕೋಟಿ ರೂಪಾಯಿಗಳಿಗೂ ಹೆಚ್ಚು ಹೂಡಿಕೆಯೊಂದಿಗೆ ಒಟ್ಟು ೩೮೭ ರೈಲ್ವೆ ಯೋಜನೆಗಳನ್ನು ಪ್ರಸ್ತುತ ಪ್ರಾಜೆಕ್ಟ್ ಮಾನಿಟರಿಂಗ್ ಗ್ರೂಪ್ ಪೋರ್ಟಲ್‌ನಲ್ಲಿ ಮೇಲ್ವಿಚಾರಣೆ ಮಾಡಲಾಗುತ್ತಿದೆ. ಈ ಪೈಕಿ ೯೭ ಉನ್ನತ ಮೌಲ್ಯದ ಯೋಜನೆಗಳನ್ನು ಪ್ರಧಾನಿ ನರೇಂದ್ರ ಮೋದಿ ಅವರು ಪ್ರಗತಿ ಕಾರ್ಯವಿಧಾನದ ಅಡಿಯಲ್ಲಿ ಪರಿಶೀಲಿಸಿದ್ದಾರೆ.

ಪ್ರಗತಿ ಕಾರ್ಯವಿಧಾನವು ಭೂಸ್ವಾಧೀನ ಮತ್ತು ಅರಣ್ಯ ಅನುಮತಿಗಳಿಗೆ ಸಂಬಂಧಿಸಿದ ಅಂತರ-ಸಚಿವಾಲಯ ಮತ್ತು ಕೇಂದ್ರ-ರಾಜ್ಯಗಳ ಸಂಬಂಧಿ ಸಮಸ್ಯೆಗಳನ್ನು ಪರಿಹರಿಸುವ ಮೂಲಕ ರೈಲ್ವೆ ಯೋಜನೆಗಳನ್ನು ತ್ವರಿತಗೊಳಿಸುವಲ್ಲಿ ನಿರ್ಣಾಯಕ ಪಾತ್ರವಹಿಸಿದೆ.

**<>><><*><><<>**

ವಕ್ಫ್ ಆಸ್ತಿಗಳ ನಿರ್ವಹಣೆಯನ್ನು ಪಾರದರ್ಶಕ, ಜನಸ್ನೇಹಿ ಮತ್ತು ಜವಾಬ್ದಾರಿಯುತವಾಗಿಸಲು ಕೇಂದ್ರ ಸರ್ಕಾರ ಉಮೀದ್ ಪೋರ್ಟಲ್‌ನಲ್ಲಿ ಸರ್ವೆ ಮಾಡ್ಯೂಲ್ ಮತ್ತು ವಕ್ಫ್ ಆಸ್ತಿ ಗುತ್ತಿಗೆ ಮಾಡ್ಯೂಲ್ ಅನ್ನು ಪ್ರಾರಂಭಿಸಿದೆ. ವಕ್ಫ್ ಆಸ್ತಿಗಳ ಗುತ್ತಿಗೆ-ಸಂಬಂಧಿತ ಮಾಹಿತಿಯ ನಿರ್ವಹಣೆಯನ್ನು ಸುಲಭಗೊಳಿಸಲು ವಕ್ಫ್ ಆಸ್ತಿ ಗುತ್ತಿಗೆ ನಿರ್ವಹಣಾ ಮಾಡ್ಯೂಲ್ ಅನ್ನು ವಿನ್ಯಾಸಗೊಳಿಸಲಾಗಿದೆ. ಗುತ್ತಿಗೆ ಮಾಹಿತಿ, ಗುತ್ತಿಗೆ ಅವಧಿ, ಗುತ್ತಿಗೆ ಮೊತ್ತ ಮತ್ತು ಇತರ ಸಂಬಂಧಿತ ಪ್ರಮುಖ ವಿವರಗಳನ್ನು ವ್ಯವಸ್ಥಿತವಾಗಿ ದಾಖಲಿಸಲು ಮತ್ತು ಮೇಲ್ವಿಚಾರಣೆ ಮಾಡಲು ಮಾಡ್ಯೂಲ್ ಅನುವು ಮಾಡಿಕೊಡುತ್ತದೆ ಎಂದು ಕೇಂದ್ರ ಅಲ್ಪಸಂಖ್ಯಾತ ವ್ಯವಹಾರಗಳ ಸಚಿವಾಲಯ ತಿಳಿಸಿದೆ.

**<>><><*><><<>**

ಖಜಕಿಸ್ತಾನದ ಎಲೆನಾ ರಿಬಾಕಿನಾ ಮೊದಲ ಬಾರಿಗೆ ಆಸ್ಟ್ರೇಲಿಯನ್ ಓಪನ್ ಪ್ರಶಸ್ತಿಯನ್ನು ಮುಡಿಗೇರಿಸಿಕೊಂಡಿದ್ದಾರೆ. ಮೆಲ್ಬೋರ್ನ್‌ನಲ್ಲಿ ಇಂದು ನಡೆದ ಮಹಿಳಾ ಸಿಂಗಲ್ಸ್ ಫೈನಲ್‌ನಲ್ಲಿ ಅರಿನಾ ಸಬಲೆಂಕಾ ಅವರನ್ನು ೬-೪, ೪-೬, ೬-೪ ಸೆಟ್‌ಗಳಿಂದ ಸೋಲಿಸಿ, ಪ್ರಶಸ್ತಿ ವಿಜೇತರಾಗಿದ್ದಾರೆ, ಪುರುಷರ ಡಬಲ್ಸ್ ವಿಭಾಗದ ಫೈನಲ್‌ನಲ್ಲಿ ಕ್ರಿಶ್ಚಿಯನ್ ಹ್ಯಾರಿಸನ್ ಮತ್ತು ನೀಲ್ ಸ್ಕುಪ್ಸ್ಕಿ ಜೋಡಿಯು ಆಸ್ಟ್ರೇಲಿಯಾದ ಜೇಸನ್ ಕುಬ್ಲರ್ ಮತ್ತು ಮಾರ್ಕ್ ಪೋಲ್ಮನ್ಸ್ ಅವರನ್ನು ೭-೬, ೬-೪ ಸೆಟ್‌ಗಳಿಂದ ಪರಾಭವಗೊಳಿಸಿ, ಪ್ರಶಸ್ತಿ ಜಯಿಸಿದ್ದಾರೆ. ಪುರುಷರ ಸಿಂಗಲ್ಸ್ ಫೈನಲ್‌ನಲ್ಲಿ, ನಾಲ್ಕನೇ ಶ್ರೇಯಾಂಕದ ಸರ್ಬಿಯಾ ಆಟಗಾರ ನೊವಾಕ್ ಜೊಕೊವಿಕ್ ನಾಳೆ ಸ್ಪೇನ್‌ನ ವಿಶ್ವದ ನಂಬರ್ ಒನ್ ಆಟಗಾರ ಕಾರ್ಲೋಸ್ ಅಲ್ಕರಾಜ್ ಅವರನ್ನು ಎದುರಿಸಲಿದ್ದಾರೆ.

**<>><><*><><<>**

ತಿರುವನಂತಪುರದಲ್ಲಿ ನಡೆಯುತ್ತಿರುವ ಐದನೇ ಮತ್ತು ಅಂತಿಮ ಟಿ-೨೦ ಅಂತಾರಾಷ್ಟ್ರೀಯ ಕ್ರಿಕೆಟ್ ಪಂದ್ಯದಲ್ಲಿ ನ್ಯೂಜಿಲೆಂಡ್ ವಿರುದ್ಧ ಟಾಸ್ ಗೆದ್ದ ಭಾರತ ಬ್ಯಾಟಿಂಗ್ ಆಯ್ಕೆ ಮಾಡಿಕೊಂಡಿದೆ. ಮೊದಲು ಬ್ಯಾಟಿಂಗ್ ಮಾಡುತ್ತಿರುವ ಭಾರತ ಇತ್ತೀಚಿನ ವರದಿ ಬಂದಾಗ ೭.೫ ಓವರ್‌ಗಳಲ್ಲಿ ೨ ವಿಕೆಟ್ ನಷ್ಟಕ್ಕೆ ೬೮ ರನ್‌ಗಳಿಸಿ ಆಡುತ್ತಿದೆ.

<>><><*><><<>

ಭಾರತದ ದೇವಿಕಾ ಸಿಹಾಗ್, ಥೈಲ್ಯಾಂಡ್ ಮಾಸ್ಟರ್ಸ್ ಬ್ಯಾಡ್ಮಿಂಟನ್ ೨೦೨೬ ಪಂದ್ಯಾವಳಿಯ ಫೈನಲ್ ಪ್ರವೇಶಿಸಿದ್ದಾರೆ. ಬ್ಯಾಂಕಾಕ್‌ನ ನಿಮಿಬುಟ್ರ್ ಕ್ರೀಡಾಂಗಣದಲ್ಲಿ ಇಂದು ಸಂಜೆ ನಡೆದ ಸೆಮಿಫೈನಲ್‌ನಲ್ಲಿ ಅವರು ಚೈನೀಸ್ ತೈಪೆಯ ಹುವಾಂಗ್ ಯು ಹ್ಸುನ್ ಅವರನ್ನು ೨೨-೨೦, ೨೧-೧೩ ಸೆಟ್‌ಗಳಿಂದ ಸೋಲಿಸಿದರು. ಮಹಿಳಾ ಸಿಂಗಲ್ಸ್‌ನ ಮತ್ತೊಂದು ಕ್ವಾರ್ಟರ್ ಫೈನಲ್ ಪಂದ್ಯದಲ್ಲಿ ಮಲೇಷ್ಯಾದ ವಾಂಗ್ ಲಿಂಗ್ ಚಿಂಗ್ ವಿರುದ್ಧ ೧೮-೨೧, ೨೧-೧೬, ೨೧-೧೩ ಸೆಟ್‌ಗಳಿಂದ ಸೋತ ನಂತರ ಇಶಾರಾಣಿ ಬರುವಾ, ಪಂದ್ಯಾವಳಿಯಿಂದ ನಿರ್ಗಮಿಸಿದರು, ಪುರುಷರ ಸಿಂಗಲ್ಸ್‌ನಲ್ಲಿ ಚೀನಾದ ಝು ಕ್ಸುವಾನ್ ಚೆನ್ ವಿರುದ್ಧ ೧೧-೨೧, ೧೭-೨೧ ಸೆಟ್‌ಗಳಿಂದ ತರುಣ್ ಮನ್ನೆಪಲ್ಲಿ ಪರಾಭವಗೊಂಡರು.

<>><><*><><<>

ಭಾರತೀಯ ಕರಾವಳಿ ಕಾವಲು ಪಡೆ ನಾಳೆ ತನ್ನ ೫೦ನೇ ಸಂಸ್ಥಾಪನಾ ದಿನವನ್ನು ಆಚರಿಸಲಿದೆ. ಸುಮಾರು ಐದು ದಶಕಗಳ ಕಾಲ ರಾಷ್ಟ್ರಕ್ಕೆ ಸಲ್ಲಿಸಿದ ಸಮರ್ಪಿತ, ನಿಸ್ವಾರ್ಥ ಸೇವೆಯನ್ನು ಗುರುತಿಸಲಿದೆ.  ೧೯೭೭ ರಲ್ಲಿ ಕೇವಲ ಏಳು ಹಡಗುಗಳೊಂದಿಗೆ ಪ್ರಾರಂಭವಾದ ಭಾರತೀಯ ಕರಾವಳಿ ಕಾವಲು ಪಡೆ ಇಂದು ೧೫೫ ಹಡಗುಗಳು ಮತ್ತು ೮೦ ವಿಮಾನಗಳನ್ನು ಒಳಗೊಂಡಿರುವ ಅಸಾಧಾರಣ ಕಡಲ ಪಡೆಯಾಗಿ ವಿಕಸನಗೊಂಡಿದೆ.

<>><>< ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು ><><<>